**ಡಾ|| ತಳವಾರ ಸಾಬಣ್ಣ, ಮಾನ್ಯ ವಿಧಾನ ಪರಿಷತ್ ಸದಸ್ಯರು ಇವರು ನಿಯಮ 72ರಡಿ ನೀಡಿರುವ ಸೂಚನೆ ಸಂಖ್ಯೆ 71ಕ್ಕೆ ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಹೇಳಿಕೆ**

## ಸೂಚನೆ:-

**ಒಳನಾಡು ಮೀನುಗಾರಿಕೆಗೆ ಸಾಂಪ್ರದಾಯಿಕ ಮೀನುಗಾರರಿಗೆ ಆದ್ಯತೆ ನೀಡುವ ಹಾಗೂ ಅವರ ಆರ್ಥಿಕ ಜೀವನ ಸುಧಾರಿಸುವ ಕುರಿತು.**

## ಹೇಳಿಕೆ:-

ಪ್ರಸ್ತುತ ಚಾಲ್ತಿಯಲ್ಲಿರುವ ಒಳನಾಡು ಜಲಸಂಪನ್ಮೂಲಗಳ ವಿಲೇವಾರಿ ಕಾರ್ಯನೀತಿ-2014 ರಂತೆ 4036 ಕೆರೆ / 85 ಜಲಾಶಯ / 189 ನದಿ ಭಾಗಗಳ ಮೀನು ಪಾಶುವಾರು ಹಕ್ಕನ್ನು ಗುತ್ತಿಗೆ / ಟೆಂಡರ್-ಕಂ-ಹರಾಜು / ಪರವಾನಗಿ ಮೂಲಕ ವಿಲೇವಾರಿ ಮಾಡಿ, ಮೀನು ಸಾಕಾಣಿಕೆಗೆ ಅವಕಾಶ ಕಲ್ಪಿಸಲಾಗಿದೆ. 40 ಹೆಕ್ಟೇರ್‌ಗಿಂತ ಹೆಚ್ಚು ಅಚ್ಚುಕಟ್ಟು ಹೊಂದಿರುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿಯು ಮೀನುಗಾರಿಕೆ ಇಲಾಖೆ ವ್ಯಾಪ್ತಿಗೆ ಹಾಗೂ 40 ಹೆಕ್ಟೇರ್‌ಗಿಂತ ಕಡಿಮೆ ಅಚ್ಚುಕಟ್ಟು ಹೊಂದಿರುವ ಕೆರೆಗಳ (ಪಟ್ಟಣ ಪಂಚಾಯಿತಿ / ಪುರಸಭೆ / ನಗರ ಸಭೆ/ ಮಹಾನಗರ ಪಾಲಿಕೆ / ಬಿ.ಬಿ.ಎಂ.ಪಿ. ವ್ಯಾಪ್ತಿ ಹೊರತುಪಡಿಸಿ) ಮೀನು ಪಾಶುವಾರು ಹಕ್ಕಿನ ವಿಲೇವಾರಿಯು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಿಗೆ ಒಳಪಟ್ಟಿರುತ್ತದೆ. ಇದಲ್ಲದೆ ರಾಜ್ಯದಲ್ಲಿರುವ 85 ಜಲಾಶಯ ಹಾಗೂ ಸುಮಾರು 5853 ಕಿ.ಮೀ. ನದಿ ಭಾಗದಲ್ಲಿನ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಸಹ ಮೀನುಗಾರಿಕೆ ಇಲಾಖಾ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಅರ್ಹ ಮೀನುಗಾರರ ಸಹಕಾರ ಸಂಘಗಳು / ಮೀನುಗಾರರ ಉತ್ಪಾದಕ ಸಂಸ್ಥೆಗಳು ನೇರ ಗುತ್ತಿಗೆ ಮುಖಾಂತರ ಇಲಾಖಾ ವ್ಯಾಪ್ತಿಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಗುತ್ತಿಗೆ ಕಾರ್ಯನೀತಿ-2014 ರನ್ವಯ ಗುತ್ತಿಗೆ ಮೊತ್ತ ಪಾವತಿಸಿ, 5 ವರ್ಷಗಳ ಅವಧಿಗೆ ಗುತ್ತಿಗೆಗೆ ಪಡೆದುಕೊಳ್ಳಲು ಅವಕಾಶವಿರುತ್ತದೆ. ನೇರ ಗುತ್ತಿಗೆ ಮೂಲಕ ವಿಲೇವಾರಿ ಮಾಡಿದ ನಂತರ ಬಾಕಿ ಉಳಿಯುವ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಇ-ಟೆಂಡರ್ ಮುಖಾಂತರ ವಿಲೇವಾರಿ ಮಾಡಲಾಗುತ್ತದೆ.

ಪ್ರಸ್ತುತ ಗುತ್ತಿಗೆ ಕಾರ್ಯನೀತಿ-2014 ರಂತೆ ಇಲಾಖಾ ವ್ಯಾಪ್ತಿಯ ಜಲ ಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ವಿಲೇವಾರಿ ಮಾಡಲಾಗುತ್ತಿದ್ದು, ಮೊದಲ ಆದ್ಯತೆಯನ್ನು ಅರ್ಹ ಮೀನುಗಾರರ ಸಹಕಾರ ಸಂಘಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ನಿಯಮಾನುಸಾರ ಅರ್ಹತೆಯನ್ನು ಹೊಂದಿದ ಸಂಘಕ್ಕೆ ನೇರ ಗುತ್ತಿಗೆ ಮೂಲಕ ಮೀನು ಪಾಶುವಾರು ಹಕ್ಕನ್ನು ವಿಲೇವಾರಿ ಮಾಡಲಾಗುತ್ತಿದೆ. 2ನೇ ಆದ್ಯತೆಯಲ್ಲಿ ಮೀನುಗಾರರ ಉತ್ಪಾದಕರ ಸಂಸ್ಥೆಗಳಿಗೆ ನೇರ ಗುತ್ತಿಗೆ ಮೂಲಕ ಮೀನು ಪಾಶುವಾರು ಹಕ್ಕನ್ನು ನೀಡಲಾಗುತ್ತಿದೆ. ಸಾಂಪ್ರದಾಯಿಕ ಮೀನುಗಾರರು ಸಹ

ಮೀನುಗಾರರ ಸಹಕಾರ ಸಂಘಗಳನ್ನು ಸ್ಥಾಪಿಸಿಕೊಂಡು ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಪಡೆಯುತ್ತಿರುತ್ತಾರೆ. ಈ ನಿಟ್ಟಿನಲ್ಲಿ ಮೀನುಗಾರಿಕೆ ಸಹಕಾರ ಸಂಘಗಳಲ್ಲಿನ ವಿವಿಧ ವರ್ಗದ ಮೀನುಗಾರರ ಸದಸ್ಯರ ಜೀವನೋಪಾಯ ಮತ್ತು ಆರ್ಥಿಕ ಬಲವರ್ಧನೆಗೆ ಮೀನುಗಾರಿಕೆ ಇಲಾಖೆಯಿಂದ ಒತ್ತು ನೀಡಲಾಗುತ್ತಿದೆ.

ಸಾಂಪ್ರದಾಯಿಕ ಮೀನುಗಾರರು / ವೃತ್ತಿಪರ ಮೀನುಗಾರರಿಗೂ ಅಥವಾ ಕ್ರೀಡಾ ಮೀನುಗಾರರು ನಿರ್ದಿಷ್ಟ ಮೊತ್ತವನ್ನು ಪಾವತಿಸಿ, ನಿಗಧಿತ ಜಲಸಂಪನ್ಮೂಲದಲ್ಲಿ, ನಿಗಧಿತ ಅವಧಿಗೆ ಪರವಾನಗಿ ಮೂಲಕ ರಾಜ್ಯದ ಆಯ್ದ ಜಲಾಶಯಗಳಲ್ಲಿ ಮತ್ತು ನದಿ ಭಾಗಗಳಲ್ಲಿ ಮೀನು ಹಿಡಿಯಲು ಅವಕಾಶ ನೀಡಲಾಗುತ್ತಿದೆ. ವಿಶೇಷ ಕಾರಣಾಂತರಗಳಿಂದಾಗಿ, ಎಲ್ಲೆಲ್ಲಿ ಒಳನಾಡು ಕೆರೆಗಳ / ಜಲಾಶಯಗಳ ಮೀನು ಪಾಶುವಾರು ಹಕ್ಕನ್ನು ಮೀನುಗಾರಿಕೆ ಇಲಾಖೆಯಿಂದ ನೇರ ಗುತ್ತಿಗೆ ಮುಖಾಂತರವಾಗಲೀ ಅಥವಾ ಇ-ಟೆಂಡರ್ ಮುಖಾಂತರವಾಗಲೀ ವಿಲೇವಾರಿ ಮಾಡಲು ಸಾಧ್ಯವಾಗದಿದ್ದ ಪಕ್ಷದಲ್ಲಿ, ಅಂತಹ ಜಲಸಂಪನ್ಮೂಲಗಳಲ್ಲಿನ ಮೀನು ಪಾಶುವಾರು ಹಕ್ಕನ್ನು ಮೀನುಗಾರಿಕೆ ನಿರ್ದೇಶಕರ ಅನುಮತಿಯ ಮೇರೆಗೆ ಸ್ಥಳೀಯ ಮೀನುಗಾರರಿಗೆ ಪರವಾನಗಿ ನೀಡುವ ಮುಖಾಂತರ ಮೀನುಗಾರರಿಗೆ ಮೀನು ಹಿಡಿಯಲು ಅವಕಾಶ ನೀಡಲಾಗುತ್ತಿದೆ.

ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಇ-ಟೆಂಡರ್ ಮೂಲಕ ವಿಲೇವಾರಿ ಮಾಡುವಾಗ ಆಯಾ ತಾಲ್ಲೂಕಿನ ಪರಿಶಿಷ್ಟ ಜಾತಿ ಮೀನುಗಾರರಿಗೆ ಶೇ.17.15 ರಷ್ಟು ಹಾಗೂ ಪರಿಶಿಷ್ಟ ಪಂಗಡದ ಮೀನುಗಾರರಿಗೆ ಶೇ.6.95 ರಷ್ಟು ಮೀಸಲಾತಿ ಕಲ್ಪಿಸಲಾಗಿದೆ.

**<u>ಒಳನಾಡು ಮೀನುಗಾರರ ಸಾಮಾಜಿಕ ಮತ್ತು ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಈ ಕೆಳಕಂಡಂತೆ ಹಲವಾರು ಪ್ರೋತ್ಸಾಹಕಾರಿ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ.</u>**

ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ ಯೋಜನೆಯಡಿ ಮೀನುಗಾರರ ಸಹಕಾರ ಸಂಘಗಳು ಗುತ್ತಿಗೆ ಪಡೆದ ಕೆರೆಗಳಿಗೆ ಉಚಿತ ಮೀನುಮರಿ ಬಿತ್ತನೆ, ಮೀನುಮರಿ ಖರೀದಿಗೆ ಸಹಾಯಧನ, ಕೆರೆ ಜಲಾಶಯದ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಮರಿ ಸಾಕಾಣಿಕೆಗೆ ಸಹಾಯಧನ, ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಹೆಚ್ಚಿನ ಆದಾಯ ತರುವ ದೃಷ್ಟಿಯಿಂದ ರೂ.10,000-00 ಗಳ ಮೌಲ್ಯದ ಬಲಿತ ಬಿತ್ತನೆ ಮೀನುಮರಿಗಳನ್ನು ದಾಸ್ತಾನು ಮಾಡುವುದು. ಜಲಾಶಯಗಳನ್ನು ಅವಲಂಬಿಸಿದ ಮೀನುಗಾರರಿಗೆ ಅನುಕೂಲವಾಗುವಂತೆ ಜಲಾಶಯಗಳಲ್ಲಿ ಬಲಿತ ಬಿತ್ತನೆ ಮರಿ ದಾಸ್ತಾನು ಮಾಡುವುದು. ಉಚಿತವಾಗಿ ಹರಿಗೋಲು ಮತ್ತು ಮೀನುಗಾರಿಕೆ ಸಲಕರಣೆ ಕಿಟ್ಟು ವಿತರಿಸುವುದು ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಅಲ್ಲದೇ ಕೆರೆ, ಜಲಾಶಯಗಳಲ್ಲಿ ಮೀನುಗಾರಿಕೆಯನ್ನು ಕೈಗೊಂಡಿರುವ ಮೀನುಗಾರರಿಗೆ ದುಡಿಯುವ ಬಂಡವಾಳದ ಅಗತ್ಯತೆಯನ್ನು ಪೂರೈಸಲು ಅತಿ ಕಡಿಮೆ ಬಡ್ಡಿ ದರದಲ್ಲಿ ಕಿಸಾನ್ ಕ್ರೆಡಿಟ್ ಕಾರ್ಡ್ ಸೌಲಭ್ಯವನ್ನು ವಿಸ್ತರಿಸಲಾಗಿದೆ.

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖನಿರೋಧಕ ಪೆಟ್ಟಿಗೆಯೊಂದಿಗೆ ಸೈಕಲ್ಲು, ದ್ವಿಚಕ್ರ ವಾಹನ, ತ್ರಿಚಕ್ರ ವಾಹನವನ್ನು ಖರೀದಿಸಲು ಸಹಾಯಧನವನ್ನು ನೀಡಲಾಗುತ್ತಿದೆ.

ಒಟ್ಟಾರೆ ಮೀನುಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳ ಲಾಭವನ್ನು ಪಡೆದು ಮತ್ತು ಇಲಾಖಾ ವ್ಯಾಪ್ತಿಯಲ್ಲಿ ಬರುವ ಕೆರೆಗಳನ್ನು ನೇರ ಗುತ್ತಿಗೆ / ಇ-ಟೆಂಡರ್ ಮೂಲಕ ಗುತ್ತಿಗೆ ಪಡೆದುಕೊಂಡು ಸಾಂಪ್ರದಾಯಿಕ ಮೀನುಗಾರರು ಅವರ ಆರ್ಥಿಕ ಜೀವನವನ್ನು ಸುಧಾರಿಸಿಕೊಳ್ಳಬಹುದಾಗಿದೆ.

---

ಸಂಖ್ಯೆ: ಪಸಂಮೀ ಇ-35 ಮೀಇಯೋ 2023

(ಎಸ್. ಅಂಗಾರ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು